ಜನೇವರಿ 2022 ಸಂಪುಟ: 5 ಸಂಚಿಕೆ 01 ಪುಟಗಳು: 2 ಖಾಸಗಿ ಪ್ರಚಾರಕ್ಕಾಗಿ ಮಾತ್ರ.....

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
RANI CHANNAMMA UNIVERSITY, BELAGAVI
विद्वान् सर्वत्र पूज्यते

# ಆರ್‌ಸಿಯು ಧ್ವನಿ

R.C.U DHWANI

Azadi Ka Amrit Mahotsav

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿದ್ಯಾರ್ಥಿಗಳ ಪ್ರಾಯೋಗಿಕ ಪತ್ರಿಕೆ...

# ಆರ್‌ಸಿಯು ಸೇವೆಗೆ ನವತಾಣದ ಮೆರಗು






ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಮತ್ತು ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ನೂತನ ಕಟ್ಟಡಗಳ ಭೂಮಿಪೂಜೆ ಮತ್ತು ಶಿಲಾನ್ಯಾಸ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೆರವೇರಿಸಿದರು. ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥನಾರಾಯಣ, ಸಚಿವೆ ಶಶಿಕಲಾ ಜೊಲ್ಲೆ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಮತ್ತು ಎಂಎಲ್‌ಸಿ ಅರುಣ ಶಹಾಪುರ ಚಿತ್ರದಲ್ಲಿದ್ದಾರೆ.

**ಬೆಳಗಾವಿ (ಮಲ್ಲಪ್ಪನಗುಡ್ಡ):** ರಾಜ್ಯದ ಅತಿ ದೊಡ್ಡ ವಿಶ್ವವಿದ್ಯಾಲಯ ಎಂದು ಖ್ಯಾತಿ ಪಡೆದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಗಡಿಭಾಗದ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವುದರ ಮೂಲಕ ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ಶಿಕ್ಷಣದ ನವಕ್ರಾಂತಿಗೆ ಮುನ್ನುಡಿ ಬರೆದಿದೆ. ಈ ಮೊದಲು ಬೆಳಗಾವಿಯ ಭೂತರಾಮನಹಟ್ಟಿ ಗ್ರಾಮದಲ್ಲಿ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ ಕಾರ್ಯನಿರ್ವಹಿಸುತ್ತಿತ್ತು. ದಶಕಗಳ ಹಿಂದೆ ಆ ಸ್ನಾತಕೋತ್ತರ ಕೇಂದ್ರವನ್ನು ರಾಜ್ಯ ಸರ್ಕಾರವು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಎಂದು ನಾಮಕರಣ ಮಾಡಿ ಹೊಸ ವಿಶ್ವವಿದ್ಯಾಲಯವೊಂದನ್ನು ಘೋಷಿಸಿ, ಮುಂಬೈ ಕರ್ನಾಟಕದ ಭಾಗಕ್ಕೆ ಉನ್ನತ ಶಿಕ್ಷಣ ಪ್ರತಿಯೊಬ್ಬರಿಗೂ ತಲುಪುವಂತೆ ಮಾಡಿತು.

ಇಷ್ಟಾದರೂ, ಆರ್‌ಸಿಯು ಕಳೆದ ಅನೇಕ ವರ್ಷಗಳಿಂದ ಸ್ವಂತ ಭೂಮಿ ಹೊಂದಿರದ ಕಾರಣ ತನ್ನ ಶಿಕ್ಷಣ ಸೇವೆಯನ್ನು ವಿಸ್ತರಿಸಲು ಸಾಧ್ಯವಾಗಿರಲಿಲ್ಲ. ಆದರೆ ಪ್ರಸ್ತುತ ಕುಲಪತಿಗಳಾದ ಪ್ರೊ. ಎಂ. ರಾಮಚಂದ್ರಗೌಡ, ಕುಲಸಚಿವರಾದ ಪ್ರೊ. ಬಸವರಾಜ ಪದ್ಮಶಾಲಿ, ಪ್ರೊ. ವೀರನಗೌಡ ಪಾಟೀಲ, ಪ್ರೊ. ಎಸ್. ಎಂ. ಹುರಕಡ್ಲಿ ಸೇರಿದಂತೆ ವಿವಿಯ ಹಿರಿಯ ಪ್ರಾಧ್ಯಾಪಕರು, ಸಿಂಡಿಕೇಟ್ ಸದಸ್ಯರು, ಸಮಸ್ತ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ಜನಪ್ರತಿನಿಧಿಗಳ ಶ್ರಮದ ಫಲವಾಗಿ ಆರ್‌ಸಿಯುಗೆ ನವತಾಣ ದೊರಕಿದೆ. ಬೆಳಗಾವಿ ತಾಲೂಕಿನ ಹಿರೇಬಾಗೇವಾಡಿ ಗ್ರಾಮದ ಹತ್ತಿರ ಮಲ್ಲಪ್ಪನ ಗುಡ್ಡದಲ್ಲಿ 126 ಎಕರೆ ಭೂಮಿಯನ್ನು ರಾಜ್ಯ ಸರ್ಕಾರ ನೀಡಿದೆ.

ಡಿಸೆಂಬರ್ 22 ಬುಧವಾರ ಮಲ್ಲಪ್ಪನ ಗುಡ್ಡದಲ್ಲಿ ಆರ್‌ಸಿಯು ವಿಶ್ವವಿದ್ಯಾಲಯದ ನೂತನ ಕಟ್ಟಡಗಳ ಸಮೂಹಕ್ಕೆ ಭೂಮಿಪೂಜೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮ ಅತ್ಯಂತ ಸಂಭ್ರಮದಿಂದ ರಾಜ್ಯದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ಅವರಿಂದ ಜರುಗಿತು.

ಮುಂದಿನ ದಿನಗಳಲ್ಲಿ ಮಲ್ಲಪ್ಪನಗುಡ್ಡದ ವಿಶಾಲ ಭೂ ಪ್ರದೇಶದಲ್ಲಿ ವಿವಿಯ ವಿವಿಧ ವಿಭಾಗಗಳ ಶೈಕ್ಷಣಿಕ ಕಟ್ಟಡಗಳು ತಲೆಎತ್ತಲಿವೆ ಮತ್ತು ಉತ್ಕೃಷ್ಟ ಮತ್ತು ಗುಣಮಟ್ಟದ ಶಿಕ್ಷಣ ನೀಡುವ ಮಾದರಿ ವಿಶ್ವವಿದ್ಯಾಲಯವಾಗಿ ಆರ್‌ಸಿಯು ನಾಡಿನಲ್ಲಿ ಹೆಸರುವಾಸಿ ಆಗಲಿದೆ.

## ‘ಸತ್ವಯುತ ಸಂಶೋಧನೆಗೆ ವಿಶ್ವವಿದ್ಯಾಲಯಗಳು ವೇದಿಕೆಯಾಗಲಿ’

**ಬೆಳಗಾವಿ (ಮಲ್ಲಪ್ಪನಗುಡ್ಡ):** ವಿಶ್ವವಿದ್ಯಾಲಯಗಳು ವಿದ್ಯಾರ್ಜನೆಗೆ ಪೂರಕವಾದ ವಾತಾವರಣವನ್ನು ನಿರ್ಮಿಸಬೇಕು. ಇದು ಜ್ಞಾನದ ಶತಮಾನವಾಗಿದೆ. ಜಗತ್ತಿನ ಶಕ್ತಿಯು ಜ್ಞಾನದ ಕಡೆಗೆ ವಾಲುತ್ತಿದೆ. ವಿಶ್ವವಿದ್ಯಾಲಯಗಳು ಇದನ್ನು ಅರಿತುಕೊಂಡು ಶಿಕ್ಷಣ ಗುಣಮಟ್ಟವನ್ನು ಸುಧಾರಿಸಬೇಕು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕರೆ ನೀಡಿದರು.

ಹಿರೇಬಾಗೇವಾಡಿಯ ಮಲ್ಲಪ್ಪನ ಗುಡ್ಡದ ಹೊಸ ನಿವೇಶನದಲ್ಲಿ 126 ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕಟ್ಟಡಗಳ ಹಾಗೂ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಎರಡನೇ ಹಂತದ ಕಟ್ಟಡ ನಿರ್ಮಾಣಕ್ಕೆ ಬುಧವಾರ (22 ಡಿಸೆಂಬರ್ 2021) ಭೂಮಿಪೂಜೆ ಹಾಗೂ ಶಿಲಾನ್ಯಾಸ ನೆರವೇರಿಸಿ ಅವರು ಮಾತನಾಡಿದರು.

ವಿವಿಯನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಬೆಳೆಸುವ ಬದ್ಧತೆ ಸಿಪಾಯಿಯಿಂದ ಹಿಡಿದು ಕುಲಪತಿಗಳವರೆಗೆ ಎಲ್ಲರಿಗೂ ಇರಬೇಕು. ವಿವಿಗಳು ವಿಭಿನ್ನವಾಗಿ ಕಾರ್ಯನಿರ್ವಹಿಸುವ ಮೂಲಕ ಪ್ರಸ್ತುತ ಸವಾಲು ಮತ್ತು ಸನ್ನಿವೇಶಗಳ ತಕ್ಕಂತೆ ಎಲ್ಲ ಕ್ಷೇತ್ರದಲ್ಲಿ ಸಾಧನೆಗೈಯಬೇಕು. ಹೊಸ ಪ್ರಯೋಗಗಳು ವಿಶ್ವವಿದ್ಯಾಲಯದಲ್ಲಿ ಆಗಬೇಕು. ಊಹೆಗೂ ನಿಲುಕದಂತಹ ತಾಂತ್ರಿಕ ಮತ್ತು ವೈಜ್ಞಾನಿಕ ಬದಲಾವಣೆಗಳಾಗುತ್ತಿವೆ. ಇದಕ್ಕೆ ಅನುಗುಣವಾಗಿ ವಿಶ್ವವಿದ್ಯಾಲಯ ಬದಲಾಗುವ ಮೂಲಕ ಆವಿಷ್ಕಾರಗಳ ಕೇಂದ್ರವಾಗಬೇಕು. ಶಿಕ್ಷಣ ಕ್ಷೇತ್ರದ ಆಮೂಲಾಗ್ರ ಬದಲಾವಣೆ ತರಬೇಕಾದರೆ ಅದು ವಿಶ್ವವಿದ್ಯಾಲಯದ ಮೂಲಕ ಮಾತ್ರ ಸಾಧ್ಯವಿದೆ. ಈ ಹೊಣೆಗಾರಿಕೆಯನ್ನು ಅರಿತು ಕೊಂಡು ವಿಶ್ವವಿದ್ಯಾಲಯದಲ್ಲಿ ಆವಿಷ್ಕಾರಗಳನ್ನು ಕೈಗೊಳ್ಳಬೇಕು ಎಂದರು.

ಯುವಸಮುದಾಯಕ್ಕೆ ಜ್ಞಾನ ಹಾಗೂ ಆತ್ಮವಿಶ್ವಾಸದ ಬಲ ನೀಡಲು ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರಲಾಗಿದೆ. ಪ್ರಾಧ್ಯಾಪಕರು ವಿಶ್ವವಿದ್ಯಾಲಯಗಳ ಕ್ಲಾಸ್ ರೂಮ್ ಗಳಿಂದ ಹೊರಬಂದು ತಮ್ಮ ಸಂಶೋಧನೆಯನ್ನು ಒರೆಗೆ ಹಚ್ಚಬೇಕು. ಸತ್ವಯುತವಾದ ಸಂಶೋಧನೆ ಎಂದಿಗೂ ಉಳಿದುಕೊಳ್ಳುತ್ತದೆ. ಆದ್ದರಿಂದ ಸತ್ವಯುತ ಹಾಗೂ ಜನೋಪಯೋಗಿ ಸಂಶೋಧನೆ ಕೈಗೊಳ್ಳಬೇಕು ಎಂದು ಸಿಎಂ ಬೊಮ್ಮಾಯಿ ಸಲಹೆ ನೀಡಿದರು.

ಶಿಕ್ಷಣದಲ್ಲಿ ಸಮರ್ಥ ನಾಯಕತ್ವ ಅತಿ ಮುಖ್ಯವಾಗಿದೆ. ವಿಶ್ವವಿದ್ಯಾಲಯದ ಕುಲಪತಿಗಳು ಇಂತಹ ನಾಯಕತ್ವ ವಹಿಸಿಕೊಂಡು ಮುನ್ನಡೆಯಬೇಕು. ಶಿಕ್ಷಣದ ಗುಣಮಟ್ಟ ಉತ್ತಮಪಡಿಸಲು ಸರಕಾರ ಸದಾ ಬೆಂಬಲವಾಗಿ ನಿಲ್ಲಲಿದೆ. ಕಳೆದ ಹತ್ತು ವರ್ಷಗಳಲ್ಲಿ ಆಗಿರುವ ಪಿಎಚ್.ಡಿ ಗಳ ವಿಶ್ಲೇಷಣೆ ಆಗಬೇಕು. ಅವುಗಳಿಂದ ಆಗುವ ಪ್ರಯೋಜನಗಳ ಬಗ್ಗೆ ಕೂಡ ಅಧ್ಯಯನ ನಡೆಸಬೇಕು ಎಂದು ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಆದರ್ಶ ವಿಶ್ವವಿದ್ಯಾಲಯವಾಗಿ ಹೊರಹೊಮ್ಮಲಿ. ರಸ್ತೆ, ನೀರು ಸೇರಿದಂತೆ ಎಲ್ಲ ಮೂಲ ಸೌಕರ್ಯಗಳನ್ನು ರಾಜ್ಯ ಸರ್ಕಾರ ಒದಗಿಸಲಿದೆ. ಒಂದು ವರ್ಷದಲ್ಲಿ ಕಟ್ಟಡ ನಿರ್ಮಾಣ ಕಾರ್ಯ ಪೂರ್ಣಗೊಳಿಸಬೇಕು. ವಿವಿಯ ಪ್ರತಿ ಕೊಠಡಿಯು ಅತ್ಯಾಧುನಿಕ ತಂತ್ರಜ್ಞಾನದಿಂದ ಕೂಡಿದ ಡಿಜಿಟಲೀಕರಣ ವ್ಯವಸ್ಥೆ ಹೊಂದಬೇಕು. ತಾರ್ಕಿಕ ಚಿಂತನೆಯನ್ನು ಬೆಳೆಸಿಕೊಂಡು ಪ್ರಶ್ನೆಗಳನ್ನು ಕೇಳುವ ಧೈರ್ಯವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಬೇಕು ಎಂದು ಸಲಹೆ ನೀಡಿದರು.

ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ಮಾತನಾಡಿ, ಈ ಭಾಗದ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ಸೌಲಭ್ಯ ಒದಗಿಸುವ ಉದ್ದೇಶದಿಂದ ವಿಶ್ವವಿದ್ಯಾಲಯಕ್ಕೆ ಭೂಮಿ ಒದಗಿಸಲಾಗಿದೆ. ಉತ್ತಮ ಶಿಕ್ಷಣ, ಕೌಶಲ್ಯ , ತಂತ್ರಜ್ಞಾನವನ್ನು ಒದಗಿಸುವ ಮೂಲಕ ಯುವ ಸಮುದಾಯವನ್ನು ಸ್ವಾವಲಂಬಿ ಮತ್ತು ಉತ್ತಮ ಬದುಕು ಕಟ್ಟಿಕೊಳ್ಳಲು ಸರಕಾರ ಅಗತ್ಯ ಸೌಲಭ್ಯಗಳನ್ನು ಒದಗಿಸುತ್ತಿದೆ. ಬೆಳಗಾವಿ ಜಿಲ್ಲೆಯ ಶೈಕ್ಷಣಿಕ ಗುಣಮಟ್ಟವನ್ನು ಇನ್ನಷ್ಟು ಉತ್ತಮಪಡಿಸುವ ನಿಟ್ಟಿನಲ್ಲಿ ಸರಕಾರ ಎಲ್ಲಾ ಸೌಲಭ್ಯ ಒದಗಿಸಲಿದೆ. ಈ ಭಾಗದ ಸವಾಲು ಮತ್ತು ಸಮಸ್ಯೆಗಳನ್ನು ಅರಿತುಕೊಂಡು ಅವುಗಳ ನಿವಾರಣೆಗಾಗಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕಾರ್ಯನಿರ್ವಹಿಸಬೇಕು ಎಂಬ ನಿರೀಕ್ಷೆ ರಾಜ್ಯ ಸರ್ಕಾರ ಹೊಂದಿದೆ ಎಂದು ತಿಳಿಸಿದರು.

ಸದ್ಯಕ್ಕೆ ರಾಜ್ಯದ ಪದವಿ ಮತ್ತು ವೃತ್ತಿಪರ ಕೋರ್ಸಗಳ ಕಾಲೇಜುಗಳ ಒಟ್ಟು ಎಂಟು ಸಾವಿರ ತರಗತಿ ಕೊಠಡಿಗಳ ಪೈಕಿ ಈಗಾಗಲೇ ಎರಡು ಸಾವಿರ ಕೊಠಡಿಗಳಲ್ಲಿ ಸ್ಮಾರ್ಟ್ ಕ್ಲಾಸ್ ಆರಂಭಿಸಲಾಗಿದೆ. ಉಳಿದ ಆರು ಸಾವಿರ ಕ್ಲಾಸ್ ಗಳನ್ನು ಸ್ಮಾರ್ಟ್ ಕ್ಲಾಸ್ ಗಳನ್ನಾಗಿ ಪರಿವರ್ತಿಸುವ ಕೆಲಸ ಮಾಡಲಾಗುವುದು. ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಿಗೆ ಸಬಲೀಕರಣ, ಸ್ವಾಯತ್ತತೆಯನ್ನು ಒದಗಿಸುವ ಮೂಲಕ ಪ್ರಸ್ತುತ ಸನ್ನಿವೇಶಕ್ಕೆ ತಕ್ಕಂತೆ ಉತ್ಕೃಷ್ಟ ಮತ್ತು ಜಾಗತಿಕ ಗುಣಮಟ್ಟದ ಶಿಕ್ಷಣವನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಸೂಪರ್ ಥರ್ಟಿ ಯೋಜನೆ ಮೂಲಕ ಮುಂದಿನ ಒಂದು ವರ್ಷದಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಶಿಕ್ಷಣ ಗುಣಮಟ್ಟ ಸುಧಾರಣೆಗೆ ಸರಕಾರ ಕ್ರಮ ಕೈಗೊಳ್ಳಲಿದೆ ಎಂದು ಭರವಸೆಯನ್ನು ನೀಡಿದರು. ಸಮಗ್ರ, ಸದೃಢ ಕರ್ನಾಟಕ ಕಟ್ಟಲು ಶಿಕ್ಷಣವೇ ಬುನಾದಿಯಾಗಿದೆ. ಆದ್ದರಿಂದ ಶಿಕ್ಷಣ ಮತ್ತು ಎಲ್ಲರಿಗೂ ಉದ್ಯೋಗ ನೀಡುವ ಪ್ರಯತ್ನವನ್ನು ಉನ್ನತ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಇಲಾಖೆ ಮಾಡುತ್ತಿದೆ ಎಂದು ಸಚಿವ ಡಾ.ಅಶ್ವತ್ಥನಾರಾಯಣ ತಿಳಿಸಿದರು.

ಮುಜರಾಯಿ, ಹಜ್ ಹಾಗೂ ವಕ್ಫ್ ಇಲಾಖೆಯ ಸಚಿವೆ ಶಶಿಕಲಾ ಜೊಲ್ಲೆ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೌಶಲ್ಯ ಮತ್ತು ತಂತ್ರಜ್ಞಾನಾಧಾರಿತ ಶಿಕ್ಷಣದ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಅಧ್ಯಕ್ಷತೆ ವಹಿಸಿದ್ದ ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಸುವರ್ಣ ವಿಧಾನಸೌಧ, ವಿಟಿಯು ಹಾಗೂ ಆರ್‌ಸಿಯು ಈ ಎರಡು ವಿಶ್ವವಿದ್ಯಾಲಯಗಳು ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಕಳಶಪ್ರಾಯವಾಗಿವೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸರ್ವತೋಮುಖ ಅಭಿವೃದ್ಧಿಗೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ರಾಮಚಂದ್ರಗೌಡ, ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳ ಸಹಕಾರದಿಂದ ವಿಶ್ವವಿದ್ಯಾಲಯಕ್ಕೆ ಹಿರೇಬಾಗೇವಾಡಿ ಬಳಿ 126 ಎಕರೆ ವಿಶಾಲವಾದ ಜಾಗ ದೊರೆತಿದೆ. ವಿವಿ ವ್ಯಾಪ್ತಿಯಲ್ಲಿನ ವಿದ್ಯಾರ್ಥಿಗಳಿಗೆ ಉತ್ಕೃಷ್ಟವಾದ ಶಿಕ್ಷಣ ಒದಗಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ. ಇದಲ್ಲದೇ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲಾಗಿದೆ ಎಂದು ಹೇಳಿದರು.

ವಿಧಾನಪರಿಷತ್ತಿನ ಸರ್ಕಾರದ ಮುಖ್ಯ ಸಚೇತಕ ಮಹಾಂತೇಶ ಕವಟಗಿಮಠ, ವಿಧಾನಪರಿಷತ್ ಸದಸ್ಯರಾದ ಅರುಣ ಶಹಾಪುರ, ಡಾ.ತಳವಾರ ಸಾಬಣ್ಣ, ಹನಮಂತ ನಿರಾಣಿ, ಸಿಂಡಿಕೇಟ್ ಸದಸ್ಯರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿನಾಯಕ ಮೋರೆ ಹಾಗೂ ಸಂಗಡಿಗರು ನಾಡಗೀತೆ ಪ್ರಸ್ತುತಪಡಿಸಿದರು. ಕುಲಸಚಿವ ಪ್ರೊ.ಬಸವರಾಜ ಪದ್ಮಶಾಲಿ ವಂದಿಸಿದರು. ಡಾ. ಗಜಾನನ ನಾಯಕ ನಿರೂಪಿಸಿದರು.

## ಉತ್ಕೃಷ್ಟ ದರ್ಜೆಗೆ ರಾಜ್ಯದ 6 ವಿಶ್ವವಿದ್ಯಾಲಯಗಳು



**ಬೆಳಗಾವಿ (ಮಲ್ಲಪ್ಪನಗುಡ್ಡ):** ರಾಜ್ಯದ ಆಯ್ದ 6 ಸರ್ಕಾರಿ ವಿಶ್ವವಿದ್ಯಾಲಯಗಳನ್ನು ‘ಯೂನಿವರ್ಸಿಟಿ ಆಫ್ ಎಮಿನೆನ್ಸ್’ ಮಟ್ಟಕ್ಕೆ ಸುಧಾರಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್. ಅಶ್ವತ್ಥನಾರಾಯಣ ಹೇಳಿದ್ದಾರೆ. ಇಲ್ಲಿನ ಹಿರೇಬಾಗೇವಾಡಿಯಲ್ಲಿ ಮೈದಾಳಲಿರುವ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ನೂತನ ಆವರಣದ ಭೂಮಿ ಪೂಜೆ ಮತ್ತು ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ರಾಣಿ ಚನ್ನಮ್ಮ ವಿ.ವಿ.ಯಿಂದಾಗಿ ಬೆಳಗಾವಿ, ಬಾಗಲಕೋಟೆ ಮತ್ತು ಚಿಕ್ಕೋಡಿ ಭಾಗಗಳ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಗುಣಮಟ್ಟದ ಶಿಕ್ಷಣ ಸಿಗಲಿದ್ದು, ಈ ವಿಶ್ವವಿದ್ಯಾಲಯವು ಕಿತ್ತೂರು ರಾಣಿ ಚನ್ನಮ್ಮ ಸ್ವಾತಂತ್ರ್ಯ ಹೋರಾಟಕ್ಕೆ ಮುನ್ನುಡಿ ದಾಖಲಿಸಿದಂತೆ, ಈ ಆಧುನಿಕ ಸಮಾಜಕ್ಕೆ ಅದರಲ್ಲೂ ಈ ಭಾಗಕ್ಕೆ ನಾಯಕತ್ವವನ್ನು ಒದಗಿಸಬೇಕು ಎಂದು ಆಶಿಸಿದರು.

ಸರಕಾರವು ಶಿಕ್ಷಣ ಕ್ರಾಂತಿಯ ಮೂಲಕ ಸಮಾಜದಲ್ಲಿ ಸಮಗ್ರ ಬದಲಾವಣೆಯನ್ನು ತರಲು ಸಂಕಲ್ಪ ಮಾಡಿದ್ದು, ಈಗಾಗಲೇ 2,500 ತರಗತಿಗಳನ್ನು ಸ್ಮಾರ್ಟ್ ಕ್ಲಾಸ್ ರೂಂಗಳನ್ನಾಗಿ ಮಾಡಲಾಗಿದೆ. ಉಳಿದಿರುವ 6 ಸಾವಿರ ತರಗತಿಗಳನ್ನು ಕೂಡ ಇನ್ನು ಕೆಲವೇ ತಿಂಗಳುಗಳಲ್ಲಿ ಸ್ಮಾರ್ಟ್ ಕ್ಲಾಸ್ ರೂಮುಗಳನ್ನಾಗಿ ಮೇಲ್ದರ್ಜೆಗೆ ಏರಿಸಲಾಗುವುದು. ಈ ಮೂಲಕ ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನದ ಮೂಲಕ ನಿರಂತರ ಕಲಿಕೆಯನ್ನು ತಮ್ಮದನ್ನಾಗಿಸಿಕೊಳ್ಳುವಂತೆ ಮಾಡಲಾಗುವುದು ಎಂದು ಅವರು ಹೇಳಿದರು.

ಇಷ್ಟೇ ಅಲ್ಲದೆ, ಎಂಜಿನಿಯರಿಂಗ್ ಶಿಕ್ಷಣದಲ್ಲಿ ಜಾಗತಿಕ ಗುಣಮಟ್ಟವನ್ನು ಕಾಪಾಡಿಕೊಳ್ಳಲು ತೀರ್ಮಾನಿಸಲಾಗಿದೆ. ಇದರಂತೆ, ರಾಜ್ಯದಲ್ಲಿ 7 ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳನ್ನು ಐಐಟಿ ಮಾದರಿಯಲ್ಲಿ ಅಭಿವೃದ್ಧಿ ಪಡಿಸಲಾಗುವುದು. ಈ ನಿಟ್ಟಿನಲ್ಲಿ ಈಗಾಗಲೇ ಯೋಜನೆಯನ್ನು ರೂಪಿಸಲಾಗಿದೆ. ಶಿಕ್ಷಣ ರಂಗದ ಸುಧಾರಣೆಗಾಗಿ ಸರಕಾರವು ಹಲವು ಅತ್ಯುಪಯುಕ್ತ ಕ್ರಮಗಳನ್ನು ಕೈಗೊಂಡಿವೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಕಿತ್ತೂರು ಕರ್ನಾಟಕ ಭಾಗದ ಮುಂಚೂಣಿ ಸಂಸ್ಥೆಯಾಗಿ ಬೆಳೆಯಬೇಕು. ಜತೆಗೆ ಸ್ಥಳಿಯ ಪರಿಸರ ಬೆಳವಣಿಗೆ, ಅಭಿವೃದ್ಧಿ ಮತ್ತು ಸುಧಾರಣೆಗೆ ಅಗತ್ಯವಾಗಿರುವ ಕಾರ್ಯಕ್ರಮ ಹಾಗೂ ಪರಿಕಲ್ಪನೆಗಳೊಂದಿಗೆ ಮುಂದಡಿ ಇಡಬೇಕು ಎಂದು ಅವರು ಸಲಹೆ ನೀಡಿದರು.

# ಮಹಾತ್ಮರನ್ನು ಜಾತಿಗೆ ಸೀಮಿತಗೊಳಿಸುವುದು ರಾಷ್ಟ್ರಕ್ಕೆ ಹಾನಿಕರ




ಆರ್‌ಸಿಯುದಲ್ಲಿ ಜರುಗಿದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಡಾ. ರವೀಂದ್ರ ಮಾತನಾಡಿದರು.



ವಿಶೇಷ ಉಪನ್ಯಾಸ ಕಾರ್ಯಕ್ರಮಕ್ಕೆ ಕುಲಸಚಿವ ಪ್ರೊ. ಬಸವರಾಜ ಪದ್ಮಶಾಲಿ ಚಾಲನೆ ನೀಡಿದರು.

**ವಿದ್ಯಾಸಂಗಮ:** ಮಹಾತ್ಮರು ಆಯಾ ಕಾಲಘಟ್ಟದ ಸಮಾಜದ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ನಡೆಸಿದ್ದಾರೆ. ಆದರೆ ಪ್ರಸಕ್ತ ದಿನಗಳಲ್ಲಿ ಆ ಎಲ್ಲ ಸಮಾಜ ಸುಧಾರಕರನ್ನು ಮತ್ತು ಮಹಾತ್ಮರನ್ನು ಜಾತಿಗೆ ಸೀಮಿತಗೊಳಿಸಿರುವ ಸಂಗತಿಯು ರಾಷ್ಟ್ರದ ಭವಿಷ್ಯಕ್ಕೆ ಕುತ್ತು ತರುವುದು ಎಂದು ಆರ್‌ಎಸ್‌ಎಸ್ ಕರ್ನಾಟಕ ಉತ್ತರ ಪ್ರಾಂತ ಕಾರ್ಯಕಾರಿಣಿ ಸದಸ್ಯ ಡಾ. ರವೀಂದ್ರ ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಮತ್ತು ವಿದ್ಯಾ ಭಾರತಿ ಉಚ್ಚ ಶಿಕ್ಷಾ ಸಂಸ್ಥಾನ ಕರ್ನಾಟಕ ಉತ್ತರ ಘಟಕದ ಸಹಯೋಗದಲ್ಲಿ ಅಜಾದಿ ಕಾ ಅಮೃತ ಮಹೋತ್ಸವದ ಅಂಗವಾಗಿ ಮಂಗಳವಾರ ವಿವಿಯ ಕುವೆಂಪು ಸಭಾಂಗಣದಲ್ಲಿ ಜರುಗಿದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರಾಷ್ಟ್ರ ಮತ್ತು ಸಮಾಜದ ಉನ್ನತಿಗೆ ಶ್ರಮಿಸಿದ ಮಹಾತ್ಮರನ್ನು ಜಾತಿಗೆ ಸೀಮಿತಗೊಳಿಸಲಾಗುತ್ತಿದೆ. ವಿಶ್ವಗುರು ಬಸವಣ್ಣ, ಛತ್ರಪತಿ ಶಿವಾಜಿ, ಡಾ.ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣ ಸೇರಿದಂತೆ ಅನೇಕ ಮಹಾತ್ಮರು ಭಾರತದ ಏಳ್ಗೆಗೆ ಶ್ರಮಿಸಿದ್ದಾರೆ. ಅವರ ವ್ಯಕ್ತಿತ್ವ, ಆದರ್ಶಗಳು ಮತ್ತು ಕೊಡುಗೆಗಳು ಈ ರಾಷ್ಟ್ರದ ಹೆಮ್ಮೆ ಮತ್ತು ಸಂಪತ್ತಾಗಿದೆ. ಹಾಗಾಗೀ ಅವರನ್ನು ಜಾತಿಗೆ ಸೀಮಿತಗೊಳಿಸಿರುವುದು ಅಜ್ಞಾನವನ್ನು ಮತ್ತು ಸಂಕುಚಿತ ಭಾವವನ್ನು ತೋರುತ್ತದೆ ಎಂದರು.

ಭಾರತ ಪರಕೀಯರ ದಾಳಿ ಮತ್ತು ಆಡಳಿತದ ವಿರುದ್ಧ ದೀರ್ಘಕಾಲದ ಸಂಘರ್ಷ ಎದುರಿಸಿದರೂ ಸಿಂಧೂ ಕಣಿವೆಯ ಸಂಸ್ಕೃತಿಯನ್ನು ಈವರೆಗೂ ಕಾಪಾಡಿಕೊಂಡು ಬಂದಿದೆ. ಸಿಂಧೂ ಕಣಿವೆಯ ಸಮಕಾಲೀನ ಎಲ್ಲ ನಾಗರಿಕತೆ ಮತ್ತು ಸಂಸ್ಕೃತಿಗಳೂ ಕಾಲಾನುಕ್ರಮವಾಗಿ ನಾಶವಾಗಿವೆ. ಸಿಂಧೂ ಕಣಿವೆಯ ಸಂಸ್ಕೃತಿ ಈವರೆಗೂ ಉಳಿಯಲು ಭಾರತದ ಕ್ಷಾತ್ರ ಮತ್ತು ಭಕ್ತಿ ಪರಂಪರೆಯ ಅನನ್ಯ ಕೊಡುಗೆಯಿದೆ ಎಂದರು.

ಮೌರ್ಯ ಸಾಮ್ರಾಜ್ಯ, ವಿಜಯನಗರ ಸಾಮ್ರಾಜ್ಯ, ಚಾಲುಕ್ಯರು, ಮರಾಠಾ ಸಾಮ್ರಾಜ್ಯ ಹೀಗೆ ಅನೇಕ ಸಾಮ್ರಾಜ್ಯಗಳ ರಾಜರು ಕ್ಷಾತ್ರ ಮತ್ತು ವೀರಗಾಥೆಗಳ ಮೂಲಕ ಭಾರತೀಯ ಸನಾತನ ಸಂಸ್ಕೃತಿಯನ್ನು ರಕ್ಷಿಸಿವೆ. ಶಕ್ತಿ ಮತ್ತು ಕ್ಷಾತ್ರ ಪರಂಪರೆಯು ಪರಕೀಯರ ದಾಳಿ ಮುಂದೆ ಸೋತಾಗ ಭಾರತೀಯ ಸನಾತನ ಸಂಸ್ಕೃತಿಯ ರಕ್ಷಣೆಗೆ ಭಾರತಾದ್ಯಂತ ಅನೇಕ ಭಕ್ತಿ ಚಳುವಳಿಗಳು ಹುಟ್ಟಿಕೊಂಡಿವೆ. 12ನೇ ಶತಮಾನದ ಶರಣರು, ಪುರಂದರದಾಸರು, ಕನಕದಾಸರು, ರಾಮದಾಸರು, ಸಂತ ಜ್ಞಾನೇಶ್ವರ, ಶಂಕರಾಚಾರ್ಯರು. ಮಧ್ವಾಚಾರ್ಯರು ಹೀಗೆ ಅನೇಕರು ಸಮಾಜ ಸುಧಾರಣೆಯ ಮೂಲಕ ಭಕ್ತಿ ಚಳುವಳಿ ಕೈಗೊಂಡು ಭಾರತೀಯ ಸಂಸ್ಕೃತಿಯ ರಕ್ಷಣೆ ಹೊಣೆ ಹೊತ್ತಿರುವುದು ಈ ಮಣ್ಣಿನ ವೈಶಿಷ್ಟತೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕುಲಸಚಿವ ಪ್ರೊ. ಬಸವರಾಜ ಪದ್ಮಶಾಲಿ ಮಾತನಾಡಿ, ಸಾವಿರಾರು ಮಹಾತ್ಮರ ತ್ಯಾಗ ಬಲಿದಾನದ ಫಲವಾಗಿ ಭಾರತಕ್ಕೆ ಸ್ವಾತಂತ್ರ್ಯ ಲಭಿಸಿದೆ. ಸ್ವಾತಂತ್ರ್ಯದ ರಕ್ಷಣೆ ಮತ್ತು ದೇಶದ ಪ್ರಗತಿ ನಮ್ಮೆಲ್ಲರ ಹೊಣೆಯಾಗಿದೆ. ಆದುದ–ರಿಂದ ಮಹಾತ್ಮರ ತ್ಯಾಗ ಬಲಿದಾನಗಳನ್ನು ಸ್ಮರಿಸುವುದರ ಜೊತೆಗೆ ಅವರ ಆದರ್ಶಗಳನ್ನು ಪಾಲಿಸುವುದು ಅವಶ್ಯವಾಗಿದೆ ಎಂದರು.

ಸಂಶೋಧನಾ ವಿದ್ಯಾರ್ಥಿನಿ ಗೀತಾ ಮಲ್ಲಾಪುರೆ ಪ್ರಾರ್ಥಿಸಿದರು. ವಿದ್ಯಾ ಭಾರತಿ ಉಚ್ಚ ಶಿಕ್ಷಾ ಸಂಸ್ಥಾನದ ಕರ್ನಾಟಕ ಉತ್ತರದ ಸಂಯೋಜಕ ಡಾ. ಪ್ರಕಾಶ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಶೋಧನಾ ವಿದ್ಯಾರ್ಥಿ ಸುರೇಶ ತಾಕತ್‌ರಾವ್ ಸ್ವಾಗತಿಸಿದರು. ಸುರೇಶ ಜಂಗೋಣಿ ಪರಿಚಯಿಸಿದರು. ಡಾ.ಶಿವು ಗೋಠೆ ರಾಷ್ಟ್ರಗೀತೆ ಹಾಡಿದರು. ಸಂಶೋಧನಾ ವಿದ್ಯಾರ್ಥಿಶಿವಪ್ಪ ಪಾಟೀಲ ವಂದಿಸಿದರು. ಸಂಪತಕುಮಾರ ಲಮಾಣಿ ನಿರೂಪಿಸಿದರು.

## ಸಂಶೋಧನೆಗಳ ಗುಣಮಟ್ಟ ವೃದ್ಧಿಗೆ ಶ್ರಮಿಸಿ: ಪ್ರೊ. ಪದ್ಮಶಾಲಿ

**ವಿದ್ಯಾಸಂಗಮ:** ಇತ್ತೀಚಿನ ಅಧುನಿಕ ದಿನಗಳಲ್ಲಿ ಕಂಪ್ಯೂಟರ್ ಮತ್ತು ಇಂಟರ್‌ನೆಟ್ ಬಳಕೆ ಹೆಚ್ಚಾಗಿದೆ. ಅಷ್ಟೇ ಅಲ್ಲದೆ ವಿಶ್ವವಿದ್ಯಾಲಯಗಳು ಸಂಶೋಧನಾ ವಿದ್ಯಾರ್ಥಿಗಳಿಗೆ ನೀಡುವ ಸೌಲಭ್ಯ ಮತ್ತು ಸವಲತ್ತುಗಳು ಕೂಡಾ ಹೆಚ್ಚಿವೆ ಆದರೆ ಪ್ರಸಕ್ತ ದಿನಗಳಲ್ಲಿ ಸಂಶೋಧನೆಗಳ ಗುಣಮಟ್ಟ ಕುಸಿಯುತ್ತಿರುವುದು ಬೇಸರದ ಸಂಗತಿಯಾಗಿದೆ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಬಸವರಾಜ ಪದ್ಮಶಾಲಿ ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಪಿ.ಎಂ.ಬಿ.ಇ ಮತ್ತು ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗದ ಸಹಯೋಗದಲ್ಲಿ ವಿವಿಯ ಕುವೆಂಪು ಸಭಾಗೃಹದಲ್ಲಿ ಗುರುವಾರ (ಡಿಸೆಂಬರ್ 30) ‘ಸಂಶೋಧನೆ ಮತ್ತು ಪ್ರಕಟಣೆಗಳಲ್ಲಿ ನೈತಿಕತೆ’ ಎಂಬ ವಿಷಯದ ನಾಲ್ಕು ದಿನದ ಕಾರ್ಯಾಗಾರದ ಸಮಾರೋಪ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಶೋಧನಾ ವಿದ್ಯಾರ್ಥಿಗಳಲ್ಲಿ ಜಾಣತನದ ಕೊರತೆಯಿಲ್ಲ. ಆದರೆ ಸಹನೆ, ಪರಿಶ್ರಮ, ಆಸಕ್ತಿ ಮತ್ತು ಶಿಸ್ತು ಈ ಗುಣಗಳ ಕೊರತೆಯ ಫಲವಾಗಿ ಗುಣಮಟ್ಟದ ಸಂಶೋಧನೆ ಹೊರಹೊಮ್ಮುತ್ತಿಲ್ಲ. ಅದರಲ್ಲೂ ಕಳೆದ 10–15 ವರ್ಷಗಳಲ್ಲಿ ವಿಶ್ವವಿದ್ಯಾಲಯಗಳಲ್ಲಿ ಜರುಗಿದ ಅನೇಕ ಪಿಎಚ್.ಡಿ ಸಂಶೋಧನೆಗಳು ಕೇವಲ ಪದವಿ ಇಲ್ಲವೇ ಪದೋನ್ನತಿಗೆ ಮಾತ್ರ ಎಂಬಂತೆ ಕಾಣುತ್ತಿವೆ ಎಂದರು. ಹಾಗಾಗೀ ಸಂಶೋಧನಾ ವಿದ್ಯಾರ್ಥಿಗಳಲ್ಲಿ ಸಂಶೋಧನೆಗೆ ಅವಶ್ಯವಿರುವ ಕೌಶಲ ಮತ್ತು ಗುಣಗಳನ್ನು ಅಳವಡಿಸಿಕೊಳ್ಳಲು ಈ ಕಾರ್ಯಾಗಾರ ಆಯೋಜಿಸಿರುವುದು ಅತ್ಯಂತ ಸೂಕ್ತ ಎಂದರು.



ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಜರುಗಿದ ‘ಸಂಶೋಧನೆ ಮತ್ತು ಪ್ರಕಟಣೆಗಳಲ್ಲಿ ನೈತಿಕತೆ’ ಎಂಬ ವಿಷಯದ ನಾಲ್ಕು ದಿನದ ಕಾರ್ಯಾಗಾರದ ಸಮಾರೋಪ ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ. ಬಸವರಾಜ ಪದ್ಮಶಾಲಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಪಿಎಂಇಬಿ ನಿರ್ದೇಶಕ ಪ್ರೊ.ಅಶೋಕ ಡಿಸೋಜಾ ಅವರು ಮಾತನಾಡಿ, ಸಂಶೋಧನೆಯಲ್ಲಿ ನೈತಿಕತೆ ಮಾತ್ರ ಅವಶ್ಯವಿಲ್ಲ. ನಮ್ಮೆಲ್ಲರ ದೈನಂದಿನ ಬದುಕಿನಲ್ಲಿ ಆದರ್ಶ ಪಾಲನೆ ಮತ್ತು ನೈತಿಕತೆ ಬಹಳ ಅವಶ್ಯವಾಗಿದೆ. ಸಂಶೋಧನೆಗಳಲ್ಲಿ ನೈತಿಕತೆ ಜೊತೆಗೆ ಸಾಮಾಜಿಕ ಕಳಕಳಿ ಕೂಡಾ ಸಮ್ಮಿಳಿತಗೊಂಡರೆ ಸಮಾಜದ ಬಹುತೇಕ ಎಲ್ಲ ಸಮಸ್ಯೆಗಳಿಗೆ ವಿಶ್ವವಿದ್ಯಾಲಯಗಳು ಪರಿಹಾರನೀಡುವ ಕೇಂದ್ರಗಳಾಗಿ ಪರಿವರ್ತನೆಗೊಳ್ಳುತ್ತವೆ ಎಂದರು.

ಸಂಶೋಧನಾ ವಿದ್ಯಾರ್ಥಿ ಮತ್ತು ಕಾರ್ಯಾಗಾರದಲ್ಲಿ ಪಾಲ್ಗೊಂಡ ಸುಲೇಮಾನ ಚೌಧರಿ, ಭಾರತಿ ಸುಣಗಾರ, ಪಂಕಜಾ ದೇಸಾಯಿ ತಮ್ಮ ಅನುಭವಗಳನ್ನು ಹಂಚಿಕೊಂಡರು. ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ. ವಿನಾಯಕ ಬಂಕಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ರಮೇಶ ಕುರಿ ಸ್ವಾಗತಿಸಿದರು. ಡಾ. ಕಿರಣ ಸವಣೂರ ವಂದಿಸಿದರು. ನಾಝಿಯಾ ಪಟವೇಗಾರ ನಿರೂಪಿಸಿದರು.

### ಕಾರ್ಯಾಗಾರದ ಉದ್ಘಾಟನಾ ಕಾರ್ಯಕ್ರಮ

**ವಿದ್ಯಾಸಂಗಮ:** ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಪಿ.ಎಂ.ಬಿ.ಇ ಮತ್ತು ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗದ ಸಹಯೋಗದಲ್ಲಿ ವಿವಿಯ ಕುವೆಂಪು ಸಭಾಗೃಹದಲ್ಲಿ ಶುಕ್ರವಾರ (ಡಿಸೆಂಬರ್ 17)‘ಸಂಶೋಧನೆ ಮತ್ತು ಪ್ರಕಟಣೆಗಳಲ್ಲಿ ನೈತಿಕತೆ’ ಎಂಬ ವಿಷಯದ ನಾಲ್ಕು ದಿನದ ಕಾರ್ಯಾಗಾರದ ಉದ್ಘಾಟನಾ ಸಮಾರಂಭ ಜರುಗಿತು.

ಕಾರ್ಯಗಾರದ ದಿಕ್ಸೂಚಿ ಭಾಷಣದಲ್ಲಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರೊ. ಪಿ. ಜಿ. ತಡಸದ ಅವರು ಮಾತನಾಡಿ, ಸಂಶೋಧನೆ ಮತ್ತು ಪ್ರಕಟಣೆ ಸದಾ ಒಂದಕ್ಕೊಂದು ಪೂರಕವಾಗಿರುತ್ತವೆ. ಪ್ರತಿಯೊಬ್ಬ ಸಂಶೋಧಕ ಸಂಶೋದನೆ ಕೈಗೊಳ್ಳುವ ಸಂದರ್ಭದಲ್ಲಿ ಮುಂದೆ ಅದು ಪ್ರಕಟವಾಗುತ್ತದೆ ಎಂಬ ಅರಿವಿನ ಎಚ್ಚರವನ್ನು ವಹಿಸುವುದೇ ನಿಜವಾದ ನೈತಿಕತೆಯಾಗಿದೆ ಎಂದರು. ಸಂಶೋಧನೆ ಎಂದರೆ ನಿಜವಾದ ಶೋಧ ಅದರಲ್ಲಿ ನೈತಿಕತೆ ಇದ್ದರೆ ಮುಂದೆ ಅದರ ಪ್ರಯೋಜನವಾಗುತ್ತದೆ. ಭಾರತದಲ್ಲಿ ವಿಶ್ವವಿದ್ಯಾಲಯಗಳಲ್ಲಿನ ಪಿಎಚ್‌ಡಿ ಸಂಶೋಧನೆಗಳ ಗುಣಮಟ್ಟ ಕ್ರಮೇಣ ಕುಸಿತಗೊಂಡ ಪರಿಣಾಮ ಇತ್ತೀಚೆಗೆ ಯುಜಿಸಿ ಅನೇಕ ಹೊಸ ನಿಯಮಾವಳಿಗಳನ್ನು ತಂದಿದೆ. ಯುವ ಸಂಶೋಧಕರು ಹೊಸ ನಿಯಮಾವಳಿಗಳ ಕುರಿತಾಗಿ ಹೆಚ್ಚಿನ ನೀಡಬೇಕು ಎಂದು ಹೇಳಿದರು.

ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ. ವಿನಾಯಕ ಬಂಕಾಪುರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಹರಿಯಾಣ ಕೇಂದ್ರಿಯ ವಿಶ್ವವಿದ್ಯಾಲಯದ ಡಾ. ಸಂತೋಷ ಹುಳಗಬಲಿ, ತುಮಕೂರ ವಿವಿಯ ಡಾ. ರೂಪೇಶಕುಮಾರ. ಎ, ಮುಂಬೈನ ಎಸ್‌ಎನ್‌ಡಿಟಿ ಮಹಿಳಾ ವಿವಿಯ ಡಾ. ಸಾರಿಕಾ ಸಾವಂತ ಕಾರ್ಯಾಗಾರದಲ್ಲಿ ವಿವಿಧ ಗೋಷ್ಠಿಗಳ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು. ಕಾರ್ಯಾಗಾರದಲ್ಲಿ ಸುಮಾರು ಅರವತ್ತಕ್ಕಿಂತ ಅಧಿಕ ಸಂಶೋಧನಾರ್ಥಿಗಳು ಮತ್ತು ಅವರ ಜೊತೆಗೆ ಸ್ನಾತಕೋತ್ತರ ವಿಧ್ಯಾರ್ಥಿಗಳು ಪಾಲ್ಗೊಂಡಿದ್ದರು. ವಿವಿಧ ವಿಭಾಗದ ಪ್ರಾಧ್ಯಾಪಕರು ಉಪಸ್ಥಿತರಿದ್ದರು. ಡಾ. ಕಿರಣ ಸವಣೂರ ಸ್ವಾಗತಿಸಿದರು. ನಾಝಿಯಾ ಪಟವೇಗರ್ ನಿರೂಪಿಸಿದರು. ಡಾ. ರಮೇಶ ಕುರಿ ವಂದನಾರ್ಪಣೆ ಮಾಡಿದರು.

## ಮೌಲಿಕ ಸಂಶೋಧನೆಗೆ ಆದತ್ಯೆ ನೀಡಿ

**ವಿದ್ಯಾಸಂಗಮ:** ಪ್ರಾಧ್ಯಾಪಕರು ವಿದ್ಯಾರ್ಥಿಗಳಿಗೆ ಮತ್ತು ಸಂಶೋಧಕರಿಗೆ ಮೌಲಿಕ ಸಂಶೋಧನೆಗೆ ಉತ್ತೇಜನ ನೀಡುವ ಅವಶ್ಯಕತೆಯಿದೆ. ಸಂಶೋಧನೆಯ ಗುಣಮಟ್ಟ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತದೆ ಎಂದು ಆರ್‌ಸಿಯು ಕುಲಪತಿ ಪ್ರೊ. ಎಂ ರಾಮಚಂದ್ರಗೌಡ ಹೇಳಿದರು.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಐಕ್ಯೂಎಸಿ (ಆಂತರಿಕ ಗುಣಮಟ್ಟದ ಭರವಸೆ ಕೋಶ) ನೇತೃತ್ವದಲ್ಲಿ ವಿವಿಯ ಕುವೆಂಪು ಸಭಾಭವನದಲ್ಲಿ ಬೌದ್ಧಿಕ ಆಸ್ತಿ ಹಕ್ಕುಗಳ ಒಳನೋಟ (ಐಪಿಆರ್) ಮತ್ತು ಪೇಟೆಂಟ್ ನೋಂದಣಿ ಪ್ರಕ್ರಿಯೆ ಕುರಿತು ಗುರುವಾರ (ಡಿಸೆಂಬರ್ 10) ರಂದು ಜರುಗಿದ ಒಂದು ದಿನದ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇವಲ ವಿಜ್ಞಾನ ಶಾಸ್ತ್ರಗಳಲ್ಲಿ ಮಾತ್ರವಲ್ಲ, ಭಾಷೆ, ಕಲೆ ಮತ್ತು ಸಮಾಜ ಶಾಸ್ತ್ರ ನಿಖಾಯಗಳಲ್ಲಿನ ಸಂಶೋಧನೆ ಮತ್ತು ಆವಿಷ್ಕಾರಗಳನ್ನು ಮಾಡಬಹುದು ಮತ್ತು ತಮ್ಮ ಆವಿಷ್ಕಾರಗಳನ್ನು ಪೇಟೆಂಟ್ ಅಡಿಯಲ್ಲಿ ನೋಂದಾಯಿಸಿಕೊಳ್ಳಬಹುದು ಎಂದು ತಿಳಿಸಿದರು.

ಕುಲಸಚಿವ ಪ್ರೊ.ಬಸವರಾಜ ಪದ್ಮಶಾಲಿ, ಮೌಲ್ಯಮಾಪನ ಕುಲಸಚಿವ ಪ್ರೊ.ಎಸ್.ಎಂ ಹುರಕಡ್ಲಿ, ಹಣಕಾಸು ಅಧಿಕಾರಿ ಪ್ರೊ.ಡಿ.ಎನ್. ಪಾಟೀಲ, ವಿವಿಧ ವಿಭಾಗಗಳ ಮುಖ್ಯಸ್ಥರು, ಡೀನರು, ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಜರಿದ್ದರು.

ಮಾರ್ಗದರ್ಶಕರು: ಪ್ರೊ. ಕಮಲಾಕ್ಷಿ ಜಿ ತಡಸದ, ಸಂಪಾದಕರು: ವಿದ್ಯಾಶ್ರೀ ಹಾಲಕೇರಿಮಠ, ಪೂಜಾ ಹೆಗಡೆ ಮತ್ತು ಅರುಣ ಹೊಸಮಠ. ಉಪಸಂಪಾದಕರು: ಪ್ರಥಮ ಮತ್ತು ದ್ವಿತೀಯ ವರ್ಷದ ಪತ್ರಿಕೋದ್ಯಮ ವಿದ್ಯಾರ್ಥಿಗಳು ಆರ್.ಸಿ.ಯು ಬೆಳಗಾವಿ,
ಪ್ರಕಾಶನ ಮತ್ತು ಮುದ್ರಣ : ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ವಿದ್ಯಾಸಂಗಮ, ಭೂತರಾಮನಹಟ್ಟಿ, ಬೆಳಗಾವಿ–591156.